# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:106 RNI NO.KAR KAN/2003/10452:No./PMG/KA/NK/BM/743/24-26 ಮಂಗಳವಾರ ದಿನಾಂಕ: 19-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಕರ್ನಾಟಕದಲ್ಲಿ 15 ಸ್ಥಾನದಲ್ಲಿ ಗೆಲುವು ಸಾಧಿಸುತ್ತೇವೆ ಸತೀಶ್ ಜಾರಕಿಹೊಳಿ

ಬೆಳಗಾವಿ : ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಗೆ ಮೋದಿ ಹಾಗೂ ಶ್ರೀರಾಮ ಇದ್ದಾನೆ. ಕಾಂಗ್ರೆಸ್ ನಲ್ಲಿಯೂ ರಾಮ ಇದ್ದಾನೆ. ನಾವು



ಸಹ ಚುನಾವಣೆಯ ತಂತ್ರ ಅನುಸರಿಸಿ ಕರ್ನಾಟಕದಲ್ಲಿ 15 ಸ್ಥಾನದಲ್ಲಿ ಗೆಲುವು ಸಾಧಿಸುತ್ತೇವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದರು. ಮೋದಿ ಅಲೆ ಈ ಬಾರಿ ಕರ್ನಾಟಕದಲ್ಲಿ ಬಿರುವುದಿಲ್ಲ. ನಮ್ಮ ರಾಜ್ಯದಲ್ಲಿ ನಾವು 15 ಸ್ಥಾನ ಗೆಲ್ಲುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಲೋಕಸಭಾ ಚುನಾವಣೆಯಲ್ಲಿ ನಾವು ಸಂವಿಧಾನ ಉಳಿಸಿ ಕಾಂಗ್ರೆಸ್ ಗೆಲ್ಲಿಸಿ ಎಂದು ಘೋಷ ವಾಕ್ಯ ಮೊಳಗಿಸುತ್ತೇವೆ. ಬಿಜೆಪಿ ಬೆಂಬಲಿತ ಸಂಘಟನೆಗಳು ಮೋದಿ ಗೆಲ್ಲಿಸಿ ಎಂದು ಕರೆ ನೀಡುತ್ತಿವೆ. ಅವು ಅವರ ಚುನಾವಣೆ ನೀತಿ. ನಮ್ಮದ್ದು ಸಂವಿಧಾನ ಉಳಿಸಿ ಕಾಂಗ್ರೆಸ್ ಗೆಲ್ಲಿಸಿ ಎಂದು ಘೋಷ ವ್ಯಾಕ್ಯ ಮೊಳಗಿಸುತ್ತೇವೆ ಎಂದರು.

## ಬಿಜೆಪಿಗೆ ಇನ್ನು ಅಭ್ಯರ್ಥಿ ಹುಡುಕುವದರಲ್ಲಿ ಇದ್ದಾರೆ

ಬೆಳಗಾವಿ: ಬೆಳಗಾವಿ ಲೋಕಸಭಾ ಚುನಾವಣೆ ಕಸರತ್ತು ಜೋರಾಗಿ ನಡೆದಿದ್ದು ಶೆಟ್ಟರ್ ಬದಲಾವಣೆಗ ಕೊನೆಕ್ಷಣದ ಕಸರತ್ತು ದೆಹಲಿ ಎತ್ತ ಮುಖ ಮಾಡಿದ ಬಿಜೆಪಿ ನಾಯಕರು ಬೆಳಗಾವಿ ಕ್ಷೇತ್ರಕ್ಕೆ ಬಿಜೆಪಿ ವರುಷದಾರ ಯಾರು ಎಂಬುದು ಸ್ಪಷ್ಟವಾಗಿ ಕಾಣ್ತಾ ಇಲ್ಲ

ಬೆಳಗಾವಿಯಲ್ಲಿ ಪಂಚಮಸಾಲಿ ತ ಪಂಚಮಸಾಲಿ ಅಭ್ಯರ್ಥಿಗಳ ಕಣಕ್ಕಿಳಿಸುವ ಪ್ರಯತ್ನ ನೆಡದಿದೆ ಅಚ್ಚರಿ ಸಂಗತಿ ಎಂದರೆ ಯತ್ತಾಳವರಿಗೆ ಟಿಕೆಟ್ ಕೊಟ್ಟರೆ ಕನಿಷ್ಠ 2 ಲಕ್ಷ ಮತ ಅಂತರದಿಂದ ಗೆಲ್ಲಿಸಿಕೊಂಡು ಬರುತ್ತವೆ ಎನ್ನುವ ಭರವಸೆ ಬೆಳಗಾವಿ ಬಿಜೆಪಿ ನಾಯಕರು ನೀಡಿದ್ದಾರೆ .

ವಿರೋಧಿಗಳ ತಂತ್ರ ಮತ್ತೆ ಅತಂತ್ರ ಪಕ್ಷದ ವರಿಷ್ಠರ ಮಾತುಕತೆ ನಡೆಸಿ ಬೆಳಗಾವಿ ಕ್ಷೇತ್ರದಲ್ಲಿ ನೀವೇ ಸ್ಪರ್ಧೆ ಮಾಡಬೇಕೆಂಬ ಸೂಚನೆ ಹಿನ್ನೆಲೆ ಒಪ್ಪಿಕೊಂಡಿದ್ದ ಮಾಜಿ ಸಿಎಂ ಈಗ ಚುನಾವಣೆಯು ಬೇಡ ಯಾವ ಕ್ಷೇತ್ರವು ಬೇಡ ವ್ಯಕ್ತಿಯವಾಗಿ ಲೋಕಸಭೆ ಸ್ಪರ್ಧೆಗೆ ಉತ್ಸವ ಎಂದು ಪಕ್ಷದ ಕಾರ್ಯಕರ್ತರು ಹಾಗೂ ವರಿಷ್ಠರು ತಿಳಿಸಿದ್ದಾರೆ.ಮಾಡಬೇಕೆಂಬ ಸೂಚನೆ ಹಿನ್ನೆಲೆ ಒಪ್ಪಿಕೊಂಡಿದ್ದ ಮಾಜಿ ಸಿಎಂ ಈಗ ಚುನಾವಣೆಯು ಬೇಡ ಯಾವ ಕ್ಷೇತ್ರವು ಬೇಡ ವ್ಯಕ್ತಿಯವಾಗಿ ಲೋಕಸಭೆ ಸ್ಪರ್ಧೆಗೆ ಉತ್ಸವ ಎಂದು ಪಕ್ಷದ ಕಾರ್ಯಕರ್ತರು ಹಾಗೂ ವರಿಷ್ಠರು ತಿಳಿಸಿದ್ದಾರೆ.

## ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ: ಪೂರ್ವಭಾವಿ ಸಭೆ ಅಗತ್ಯ ಸಿದ್ಧತೆಗೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ



ಬೆಳಗಾವಿ,ಮಾ.18 : ಪರೀಕ್ಷಾ ಅಕ್ರಮಗಳು, ಅನಗತ್ಯ ಗೊಂದಲ, ಅನಾನುಕೂಲಗಳನ್ನು ಉಂಟಾಗದಂತೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ, ಪರೀಕ್ಷಾ ನಿಯೋಜಿತ ಸಿಬ್ಬಂದಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಪರೀಕ್ಷೆಗಳು ಸುಗಮವಾಗಿ ನಡೆಯುವಂತೆ ಅಗತ್ಯ ಸಿದ್ದತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನತೇಶ್ ಪಾಟೀಲ ಸೂಚನೆ ನೀಡಿದರು.

ಶಿಕ್ಷಣ ಇಲಾಖೆಯ ವತಿಯಿಂದ ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಸೋಮವಾರ (ಮಾ.18) ನಡೆದ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗಳ ಪೂರ್ವ ತಯಾರಿ ಕುರಿತು ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾರ್ಚ್ 25 ರಿಂದ ಏಪ್ರಿಲ್ 06 ರವರೆಗೆ ನಡೆಯಲಿರುವ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗಳನ್ನು ಯಾವುದೇ ಅಕ್ರಮ ಚಟುವಟಿಕೆಗೆ ಅವಕಾಶ ಕೊಡದೇ ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ನಡೆಸಬೇಕು ಎಂದು ತಿಳಿಸಿದರು.

ಪರೀಕ್ಷಾ ಕೇಂದ್ರದೊಳಗೆ ಯಾವುದೇ ಬಗೆಯ ಮೊಬೈಲ್ ಫೋನ್, ಕ್ಯಾಲ್ಕುಲೇಟರ್ ಅಥವಾ ಇನ್ನಿತರೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ಬಳಸುವುದು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಸೂಕ್ತ ಆಸನದ ವ್ಯವಸ್ಥೆ ಆಯಾ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಮಾಡಬೇಕು ಎಂದು ಸೂಚನೆ ನೀಡಿದರು. (2 ನೇ ಪುಟಕ್ಕೆ)

## 6 ರಾಜ್ಯಗಳ ಗೃಹ ಕಾರ್ಯದರ್ಶಿಗಳು,ಪೊಲೀಸ್ ಮುಖ್ಯಸ್ಥರ ವರ್ಗಾವಣೆ ಆಯೋಗ ಆದೇಶ

ನವದೆಹಲಿ: ಮುಂಬರುವ ಲೋಕಸಭೆ ಚುನಾವಣೆಗೆ ಪೂರ್ವಭಾವಿಯಾಗಿ ಹಲವು ರಾಜ್ಯಗಳಲ್ಲಿ ಹಲವಾರು ಪ್ರಮುಖ ಅಧಿಕಾರಿಗಳನ್ನು ವರ್ಗಾವಣೆ ಮಾಡುವಂತೆ ಭಾರತೀಯ ಚುನಾವಣಾ ಆಯೋಗ(ಇಸಿಐ) ಸೋಮವಾರ ನಿರ್ದೇಶನಗಳನ್ನು ನೀಡಿದೆ. ಗುಜರಾತ್, ಉತ್ತರ ಪ್ರದೇಶ, ಬಿಹಾರ, ಜಾರ್ಖಂಡ್, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡ ಸೇರಿದಂತೆ ಆರು ರಾಜ್ಯಗಳ ಗೃಹ ಕಾರ್ಯದರ್ಶಿಗಳನ್ನು ವರ್ಗಾವಣೆಮಾಡಿ ಚುನಾವಣಾ ಆಯೋಗ ಆದೇಶಿಸಿದೆ.

ಇದಲ್ಲದೆ, ಆಯಾ ಮುಖ್ಯಮಂತ್ರಿಗಳ ಕಛೇರಿಗಳಲ್ಲಿ ಉಸ್ತುವಾರಿ ವಹಿಸಿದ್ದ ಮಿಜೋರಾಂ ಮತ್ತು ಹಿಮಾಚಲ ಪ್ರದೇಶದ ಸಾಮಾನ್ಯ ಆಡಳಿತ ಇಲಾಖೆಯ ಕಾರ್ಯದರ್ಶಿಯನ್ನು ಸಹ ವರ್ಗಾವಣೆ ಮಾಡಲಾಗಿದೆ ಎಂದು ಮೂಲಗಳು ತಿಳಿಸಿವೆ. ಪಶ್ಚಿಮ ಬಂಗಾಳದ ಪೊಲೀಸ್ ಮಹಾನಿರ್ದೇಶಕರನ್ನು(ಡಿಜಿಪಿ) ಸಹ ವರ್ಗಾವಣೆ ಮಾಡುವಂತೆ ಕೇಂದ್ರ ಚುನಾವಣಾ ಆಯೋಗ ಸೂಚಿಸಿದೆ.

ಮೂಲಗಳ ಪ್ರಕಾರ, ಬೃಹನ್‌ಮುಂಬೈ ಮುನ್ಸಿಪಲ್ ಕಮಿಷನರ್ ಇಕ್ಬಾಲ್ ಸಿಂಗ್ ಚಾಹಲ್ ಮತ್ತು ಹಲವು ಹೆಚ್ಚುವರಿ ಆಯುಕ್ತರು ಹಾಗೂ ಉಪ ಆಯುಕ್ತರನ್ನು ವರ್ಗಾವಣೆ ಮಾಡಲು ಚುನಾವಣಾ ಆಯೋಗ ಕ್ರಮ ಕೈಗೊಂಡಿದೆ.

ದೇಶಾದ್ಯಂತ ಚುನಾವಣಾ ಪ್ರಕ್ರಿಯೆಯ ಸಮಗ್ರತೆಯನ್ನು ಕಾಪಾಡಿಕೊಳ್ಳಲು, ನ್ಯಾಯಸಮ್ಮತ ಮತ್ತು ಪಾರದರ್ಶಕ ಚುನಾವಣೆಯನ್ನು ಖಚಿತಪಡಿಸಿಕೊಳ್ಳಲು ಚುನಾವಣಾ ಆಯೋಗ ಈ ಕ್ರಮ ತೆಗೆದುಕೊಂಡಿದೆ.

## ಗ್ಲೂಕೋಮಾ ಕಣ್ಣಿನ ಕಾಯಿಲೆಗೆ ಪ್ರಾರಂಭದ ಹಂತದಲ್ಲಿ ಚಿಕಿತ್ಸೆ ಪಡೆದುಕೊಳ್ಳಬೇಕು: ಡಾ.ಮಹೇಶ ಕಿವಡಸನ್ನವರ

ಬೆಳಗಾವಿ,ಮಾ.18 : ಗ್ಲೂಕೋಮಾ ಒಂದು ಸಾಮಾನ್ಯ ಕಣ್ಣಿನ ಕಾಯಿಲೆಯಾಗಿದ್ದು ಅದು ಆಪ್ಟಿಕ್ ನರದ ಹಾನಿಗೆ ಕಾರಣವಾಗುತ್ತದೆ. ಕಣ್ಣಿನಿಂದ ಮೆದುಳಿಗೆ ಮಾಹಿತಿಯನ್ನು ರವಾನಿಸುವ ಆಪ್ಟಿಕ್ ನರಕ್ಕೆ ಈ ಹಾನಿಯು ಕುರುಡುತನಕ್ಕೆ ಕಾರಣವಾಗಬಹುದು. ಸರಿಯಾಗಿ ಚಿಕಿತ್ಸೆ ನೀಡದಿದ್ದರೆ, ದೃಷ್ಟಿ ನಷ್ಟವು



ತಾತ್ಕಾಲಿಕ ಅಥವಾ ಶಾಶ್ವತವಾಗಬಹುದು.

ಆದ್ದರಿಂದ ಪ್ರಾರಂಭದ ಹಂತದಲ್ಲಿ ರೋಗವನ್ನು ಪತ್ತೆ ಮಾಡಿ ತ್ವರಿತ ಚಿಕಿತ್ಸೆಯನ್ನು ನೀಡಿದಾಗ ಮಾತ್ರ ಗ್ಲುಕೋಮಾ ಖಾಯಿಲೆ ಗುಣಪಡಿಸಬಹುದಾಗಿದೆ ಎಂದು ಖಾನಾಪೂರದ ತಾಲೂಕಾ ಆರೋಗ್ಯ ಅಧಿಕಾರಿಗಳಾದ ಡಾ.ಮಹೇಶ ಕಿವಡಸನ್ನವರ ಅವರು ತಿಳಿಸಿದರು.

ಖಾನಾಪೂರದ ಸರ್ಕಾರಿ ಆಸ್ಪತ್ರೆಯಲ್ಲಿ ಸೋಮವಾರ (ಮಾ.18) ನಡೆದ ರಾಷ್ಟ್ರೀಯ ಅಂಧತ್ವ ನಿವಾರಣಾ ಕಾರ್ಯಕ್ರಮದಡಿ ವಿಶ್ವ ಗ್ಲಾಕೋಮಾ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆರೋಗ್ಯ ಇಲಾಖೆ ಕೈಗೊಂಡಿರುವ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮದಡಿ ನಾವು ಸದಾ ಸಹಕಾರ ನೀಡಿದ್ದೇವೆ ಹಾಗೂ ರೋಗಗಳ ನಿಯಂತ್ರಣ ಮತ್ತು ನಿರ್ಮೂಲನೆಗೆ ಎಲ್ಲರೂ ಸೇರಿ ಶ್ರಮಿಸೋಣ. ಸಾರ್ವಜನಿಕರು ತಪ್ಪದೇ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ಡಾ.ಮಹೇಶ ಕಿವಡಸನ್ನವರ ತಿಳಿಸಿದರು.

ಪ್ರಾಸ್ತಾವಿಕವಾಗಿ ಅಪರ ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿಗಳಾದ ಭರತ ಬಹುರೂಪಿ ಇವರು ಮಾತನಾಡಿ ಜಿಲ್ಲೆಯಲ್ಲಿಯ ಅಂಧತ್ವ ಅಂಕಿ ಅಂಶಗಳ ಕುರಿತು ತಿಳಿಸಿದರು "Liniting for A Glaucoma-free world" ಎಂಬ ಈ ವರ್ಷದ ಘೋಷವಾಕ್ಯದ ಕುರಿತು ಮಾತನಾಡಿದರು.

ಖಾನಾಪೂರ ಸಾರ್ವಜನಿಕ ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಡಾ. ನಾರಾಯಣ ವಡ್ಡಿನ, ಖಾನಾಪೂರದ ಸಾರ್ವಜನಿಕ ಆಸ್ಪತ್ರೆಯ ನೇತ್ರತಜ್ಞರಾದ ಡಾ. ಸಂತೋಷ ಹಸರಗುಂದಿ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಅರುಣ ಮನೋಳಿ ಮತ್ತು ಶ್ರೀ. ಮಂಜುನಾಥ ನಾಯ್ಕ, ನೇತ್ರಾಧಿಕಾರಿಗಳಾದ ಭೀಮನಗೌಡ ಪಾಟೀಲ ಮತ್ತು ಫೀನಾಜ ಬಾಳೆಕುಂದ್ರಿ, ಕ್ಷೇತ್ರ ಆರೋಗ್ಯ ಶಿಕ್ಷಣ ಅಧಿಕಾರಿ ಮಾನಂದಾ ಪಾರಿಶ್ವಾಡ, ತಾಲೂಕಾ ಆಶಾ ಮೆಂಟರ್ ಮಹಾನಂದ ಜಕಾತಿ, ಆರೋಗ್ಯ ಸಿಬ್ಬಂದಿಗಳ ಹಾಗೂ ಸಾರ್ವಜನಕರು ಉಪಸ್ಥಿತರಿದ್ದರು.

## ಹೊಸಪೇಟೆ ಎಪಿಎಂಸಿ ಪ್ರಾಂಗಣದಲ್ಲಿ ರಾಗಿ, ಜೋಳದ ಖರೀದಿ ಪ್ರಕ್ರಿಯೆ ಆರಂಭ: ಜಿಲ್ಲಾಧಿಕಾರಿಗಳಿಂದ ಪರಿಶೀಲನೆ

ಹೊಸಪೇಟೆ (ವಿಜಯನಗರ) ಮಾರ್ಚ 18 : ಹೊಸಪೇಟೆ ಎಪಿಎಂಸಿ ಪ್ರಾಂಗಣದಲ್ಲಿ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಮುಂಗಾರು ಹಂಗಾಮಿನ ರಾಗಿ ಮತ್ತು ಜೋಳದ ಖರೀದಿ ಪ್ರಕ್ರಿಯೆ ಮಾರ್ಚ 18ರಂದು ಪ್ರಾರಂಭವಾಯಿತು.

ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ಅವರು ಮಾರ್ಚ 18ರಂದು ಎಪಿಎಂಸಿ ಪ್ರಾಂಗಣಕ್ಕೆ ಭೇಟಿ ನೀಡಿ, ಸರ್ಕಾರದ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯ ಮೂಲಕ ರೈತರಿಂದ ರಾಗಿ ಮತ್ತು ಜೋಳ ಖರೀದಿಸುವ ಪ್ರಕ್ರಿಯೆ ಬಗ್ಗೆ ಮಾಹಿತಿ ಪಡೆದರು.

ಪ್ರಸ್ತುತ ಈ ಖರೀದಿ ಕೇಂದ್ರದಲ್ಲಿ 59 ರೈತರು 1132.50 ಕ್ವಿಂಟಾಲ್ ರಾಗಿಯನ್ನು, 23 ರೈತರು 910 ಕ್ವಿಂಟಾಲ್ ಬಿಳಿಜೋಳವನ್ನು ನೋಂದಾಯಿಸಿದ್ದಾರೆ. ಸರ್ಕಾರವು ಈ ಬಾರಿ ಎಫ್.ಎ.ಕ್ಯೂ. ಗುಣಮಟ್ಟದ ಪ್ರತಿ ಕ್ವಿಂಟಾಲ್ ರಾಗಿಗೆ 3,846 ರೂ. ಮತ್ತು ಎಫ್.ಎ.ಕ್ಯೂ. ಗುಣಮಟ್ಟದ ಜೋಳಕ್ಕೆ 3180 ರೂ.ಗಳನ್ನು ಘೋಷಿಸಿರುತ್ತದೆ ಎಂದು ಅಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ 2022-23ನೇ ಸಾಲಿನಲ್ಲಿ ಹೊಸಪೇಟೆ ಖರೀದಿ ಕೇಂದ್ರವು ಆರಂಭವಾಗಿದೆ. 2022-23ನೇ ಸಾಲಿನ ಮುಂಗಾರು ಋತುವಿನಲ್ಲಿ ಬೆಳೆದ ಭತ್ತ, ರಾಗಿ ಮತ್ತು



ಜೋಳ ಉತ್ಪನ್ನಗಳನ್ನು ಖರೀದಿಸಲು ವಿಜಯನಗರ ಜಿಲ್ಲೆಗೆ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯು ಖರೀದಿ ಎಜೆನ್ಸಿಯಾಗಿರುತ್ತದೆ. ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯು ವಿಜಯನಗರ ಜಿಲ್ಲೆಯ ಹೊಸಪೇಟೆ ಎಪಿಎಂಸಿ ಪ್ರಾಂಗಣದಲ್ಲಿ ಡಿಸೆಂಬರ್ 1 ರಿಂದ ನೋಂದಣಿ ಕೇಂದ್ರವನ್ನು ತೆರೆದಿರುತ್ತದೆ ಎಂದು ಅಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು. ಖರೀದಿ ಮಾಡಿದ ಉತ್ಪನ್ನವನ್ನು ಸರ್ಕಾರವು ಸಾರ್ವಜನಿಕ ವಿತರಣಾ ವ್ಯವಸ್ಥೆಯಲ್ಲಿ ವಿತರಿಸುವ ಉದ್ದೇಶವಿರುವುದರಿಂದ ರಾಗಿ ಮತ್ತು ಜೋಳವನ್ನು ಬೆಳೆದ ರೈತರು ತಾವು ಬೆಳೆದ ಉತ್ಪನ್ನವನ್ನು ಚೆನ್ನಾಗಿ ಒಣಗಿಸಿ, ಯಾವುದೇ ಕಸ, ಕಡ್ಡಿ, ಧೂಳು, ಮಣ್ಣಿರದಂತೆ ಸ್ವಚ್ಚಗೊಳಿಸಿ ಖರೀದಿ ಕೇಂದ್ರಗಳಿಗೆ ತರಲು ರೈತರಲ್ಲಿ ಮನವಿ ಮಾಡಿರುವುದಾಗಿ ಅಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಆಹಾರ ಇಲಾಖೆಯ ಉಪ ನಿರ್ದೇಶಕರಾದ ಮಲ್ಲಿಕಾರ್ಜುನ, ಕೃಷಿ ಮಾರಾಟ ಮಂಡಳಿಯ ಸಿದ್ದು ಸ್ವಾಮಿ, ಖರೀದಿ ಏಜೆನ್ಸಿದಾರರು, ಜಿಲ್ಲಾ ವ್ಯವಸ್ಥಾಪಕರು ಈ ಸಂದರ್ಭದಲ್ಲಿ ಇದ್ದರು.

### ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ: ಪೂರ್ವಭಾವಿ ಸಭೆ

## ಪರೀಕ್ಷಾ ಅಕ್ರಮಗಳಿಗೆ ಅವಕಾಶವಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಿ : ಡಿಸಿ ನಲಿನ್ ಅತುಲ್

ಕೊಪ್ಪಳ, ಮಾರ್ಚ್ 18: ಪರೀಕ್ಷಾ ಅಕ್ರಮಗಳು, ಅನಗತ್ಯ ಗೊಂದಲ, ಅನನುಕೂಲಗಳು ಉಂಟಾಗದಂತೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ, ಪರೀಕ್ಷಾ ನಿಯೋಜಿತ ಸಿಬ್ಬಂದಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಿ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆಯಿಂದ ಸೋಮವಾರದಂದು ಆಯೋಜಿಸಿದ್ದ 2024ನೇ ಮಾರ್ಚ್/ಏಪ್ರಿಲ್ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗಳ ಕುರಿತ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾರ್ಚ್ 25 ರಿಂದ ಏಪ್ರಿಲ್ 06 ರವರೆಗೆ ನಡೆಯಲಿರುವ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗಳನ್ನು ಯಾವುದೇ ಅಕ್ರಮ ಚಟುವಟಿಕೆಗೆ ಅವಕಾಶ ಕೊಡದೇ ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ನಡೆಸಬೇಕು. ಈ ನಿಟ್ಟಿನಲ್ಲಿ ಪ್ರಶ್ನೆಪತ್ರಿಕೆ ಖಜಾನೆ ಇಲಾಖೆಗೆ ಠೇವಣಿಯಲ್ಲಿರಿಸಿ. ಪರೀಕ್ಷಾ ದಿನದಂದು ಖಜಾನೆಯಿಂದ ಪ್ರಶ್ನೆಪತ್ರಿಕೆಗಳನ್ನು ತೆಗೆದುಕೊಂಡು ನಿಗದಿತ ಅವಧಿಯೊಳಗೆ ಪರೀಕ್ಷಾ ಕೇಂದ್ರಗಳಿಗೆ ತಲುಪಿಸುವ ಹೊಣೆ ಆಯಾ ಮಾರ್ಗಾಧಿಕಾರಿಗಳಿಗೆ ವಹಿಸಲಾಗಿದ್ದು, ವಿಳಂಬಕ್ಕೆ ಅವಕಾಶವಿಲ್ಲದಂತೆ ಪ್ರಶ್ನೆಪತ್ರಿಕೆಯನ್ನು ನಿಗದಿತ ಅವಧಿಯೊಳಗೆ ತಲುಪಿಸಬೇಕು. ಪರೀಕ್ಷಾ ಕೇಂದ್ರದೊಳಗೆ ಯಾವುದೇ ಬಗೆಯ ಮೊಬೈಲ್ ಫೋನ್, ಕ್ಯಾಲ್ಕುಲೇಟರ್ ಅಥವಾ ಇನ್ನಿತರೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ಒಯ್ಯುವುದನ್ನು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಸೂಕ್ತ ಆಸನದ ವ್ಯವಸ್ಥೆಯನ್ನು ಆಯಾ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಕೈಗೊಳ್ಳಬೇಕು ಎಂದು



ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಮಯಕ್ಕೆ ಸರಿಯಾಗಿ ಪರೀಕ್ಷಾ ಕೇಂದ್ರಗಳಿಗೆ ತೆರಳಲು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಅಗತ್ಯ ಬಸ್ ವ್ಯವಸ್ಥೆಯನ್ನು ಕಲ್ಪಿಸಬೇಕು. ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರಗಳಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಕೈಗೊಳ್ಳಬೇಕು. ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು ಹಾಗೂ ಪರೀಕ್ಷಾ ಕಾರ್ಯಕ್ಕೆ ನಿಯೋಜನೆಗೊಂಡ ಶಿಕ್ಷಕರು, ಅಧಿಕಾರಿ, ಸಿಬ್ಬಂದಿಗಳನ್ನು ಹೊರತುಪಡಿಸಿ, ಇನ್ನುಳಿದವರ ಪ್ರವೇಶಕ್ಕೆ ಅವಕಾಶ ನೀಡಬಾರದು. ಪರೀಕ್ಷಾ ಕೇಂದ್ರದ 200 ಮೀಟರ್ ಸುತ್ತಲು ನಿಷೇಧಾಜ್ಞೆ ಜಾರಿಗೊಳಿಸಲಾಗುವುದು. ಕುಡಿಯುವ ನೀರಿನ ಪೂರೈಕೆಯಲ್ಲಿ ತೊಂದರೆ ಇದ್ದಲ್ಲಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು, ಸಂಬಂಧಿಸಿದ ನಗರಸಭೆ ಅಥವಾ ಗ್ರಾಮ ಪಂಚಾಯತ್ ಅಧಿಕಾರಿಗಳನ್ನು ಮುಂಚಿತವಾಗಿ ಸಂಪರ್ಕಿಸಿ ಕ್ರಮ ಕೈಗೊಳ್ಳಬೇಕು. ಇದಲ್ಲದೇ ಶೌಚಾಲಯಗಳ ವ್ಯವಸ್ಥೆಯನ್ನು ಸಹ ಕಲ್ಪಿಸಬೇಕು. ಪರೀಕ್ಷೆ ನಡೆಸುವುದಕ್ಕೆ ಸಂಬಂಧಿಸಿದಂತೆ ಸರ್ಕಾರದ ಸೂಚನೆಗಳನ್ನು ಎಲ್ಲ ಅಧಿಕಾರಿಗಳು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದರು. ಯಾವುದೇ ಪರೀಕ್ಷಾ ಪೂರ್ವ ಹಾಗೂ ಪರೀಕ್ಷಾ ಸಮಯದಲ್ಲಿ ಪಶ್ನೆ ಪತ್ರಿಕೆ ಸೋರಿಕೆ ಮಾಡುವುದು ಕಂಡುಬಂದಲ್ಲಿ ಕರ್ನಾಟಕ ಶಿಕ್ಷಣ ಕಾಯ್ದೆ ಕಂಡಿಕೆ 115ರ ದಂಡ ಸಂಹಿತೆ ಪರೀಕ್ಷಾ ನಿಯಮ ಉಲ್ಲಂಘನೆ ಸೆಕ್ಷನ್ 24ಎ ಪ್ರಕಾರ ತಪ್ಪಿತಸ್ಥರಿಗೆ 3 ರಿಂದ 5 ವರ್ಷಗಳ ವರೆಗೆ ಜೈಲುವಾಸ ಹಾಗೂ 5 ಲಕ್ಷದವರೆಗೆ ದಂಡ ವಿಧಿಸಲು ಕಾಯ್ದೆಯಲ್ಲಿ ಅವಕಾಶವಿದ್ದು, ಶಿಕ್ಷಕರು, ಪರೀಕ್ಷಾ ನಿಯೋಜಿತ ಸಿಬ್ಬಂದಿಗಳು ಜವಾಬ್ದಾರಿ ಹಾಗೂ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಿ ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ಅವರು ಮಾತನಾಡಿ, ಪರೀಕ್ಷೆ ಬರೆಯುವ ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಪ್ರಥಮ ಚಿಕಿತ್ಸೆಗಾಗಿ ಪರೀಕ್ಷಾ ಕೇಂದ್ರದಲ್ಲಿ ಆರೋಗ್ಯ ಕಿಟ್ ಮತ್ತು ಆರೋಗ್ಯ ಸಹಾಯಕರನ್ನು ನಿಯೋಜಿಸಿ. ಪರೀಕ್ಷೆ ಬರೆಯುವ ವಿಕಲಚೇತನ ವಿದ್ಯಾರ್ಥಿಗಳಿಗೆ ನೆಲ ಮಹಡಿಯಲ್ಲಿ ಸೂಕ್ತ ಆಸನದ ವ್ಯವಸ್ಥೆ ಮಾಡಬೇಕು. ಅಂಥ ವಿದ್ಯಾರ್ಥಿಗಳಿಗೆ ಪ್ರತ್ಯೇಕ ಕೊಠಡಿಯ ವ್ಯವಸ್ಥೆ ಮತ್ತು ಬರವಣಿಗೆ ಸಹಾಯಕರ ಒಪ್ಪಿಗೆ ಪತ್ರವನ್ನು ಪರಿಶೀಲಿಸಬೇಕು. ಸುಗಮವಾಗಿ ಪರೀಕ್ಷೆ ನಡೆಯುವಂತೆ ಸೂಕ್ತ ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಶ್ರೀಶೈಲ ಬಿರಾದಾರ ಅವರು ಮಾತನಾಡಿ, ನಡೆಯಲಿರುವ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗೆ ಜಿಲ್ಲೆಯ ಒಟ್ಟು 25,481 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಜಿಲ್ಲೆಯ ಗಂಗಾವತಿ ತಾಲ್ಲೂಕಿನ 23, ಕೊಪ್ಪಳ ತಾಲ್ಲೂಕಿನ 23, ಕುಷ್ಟಗಿ ತಾಲ್ಲೂಕಿನ 15 ಹಾಗೂ ಯಲಬುರ್ಗಾ ತಾಲ್ಲೂಕಿನ 14 ಸೇರಿದಂತೆ ಒಟ್ಟು 75 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿವೆ. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಒಬ್ಬ ಮುಖ್ಯ ಅಧೀಕ್ಷಕರು ಹಾಗೂ ಪ್ರಶ್ನೆಪತ್ರಿಕೆ ಅಭಿರಕ್ಷಕರನ್ನು ನೇಮಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಹೆಚ್ಚುವರಿ ಎಸ್‌ಪಿ ಹೇಮಂತ್‌ಕುಮಾರ ಸೇರಿದಂತೆ ವಿವಿಧ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು, ವಿಷಯ ಪರಿವೀಕ್ಷಕರು, 75 ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು, ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ತಾಲ್ಲೂಕು ನೋಡಲ್ ಅಧಿಕಾರಿಗಳು, ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.